**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಗೋವಿಂದ ರಾಜು ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ಸೂಚನೆ:-**

2017 ರಿಂದ 2022 ರವರೆಗೂ ರಾಜ್ಯದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗಿರುವ ಆರೋಗ್ಯ ಉಪಕರ, ಗ್ರಂಥಾಲಯ ಉಪಕರ ಮತ್ತು ಭಿಕ್ಷಾಟನಾ ಉಪಕರಗಳ ಸೆಸ್ ಹಣವನ್ನು ಸಂಬಂಧಪಟ್ಟ ಇಲಾಖೆಗಳಿಗೆ ಇದುವರೆಗೂ ವರ್ಗಾಯಿಸಿರುವುದಿಲ್ಲ. ಕಳೆದ 5 ವರ್ಷದಿಂದ ಸ್ಥಳೀಯ ಸಂಸ್ಥೆಗಳು ರೂ.504.00 ಕೋಟಿ ಆರೋಗ್ಯ ಸೆಸ್, ರೂ.54.00 ಕೋಟಿ ಗ್ರಂಥಾಲಯ ಉಪಕರ ಮತ್ತು ರೂ.30.00 ಕೋಟಿ ಭಿಕ್ಷಾಟನಾ ಸೆಸ್ ಹಣವನ್ನು ಇದುವರೆಗೂ ಸಂಬಂಧಪಟ್ಟ ಇಲಾಖೆಗಳ ಖಾತೆಗೆ ವರ್ಗಾಯಿಸಿಲ್ಲದಿರುವುದು, ಲೆಕ್ಕ ಪರಿಶೋಧನಾ ವರದಿಯಲ್ಲಿ ಬಹಿರಂಗವಾಗಿದ್ದು, ಸರಕಾರ ಈ ಹಣವನ್ನು ಅನ್ಯಕಾರ್ಯಗಳಿಗೆ ಬಳಸಿಕೊಂಡಿರುವುದರಿಂದ, ರಾಜ್ಯದಲ್ಲಿ ಎಗ್ಗಿಲ್ಲದೆ ಭಿಕ್ಷಾಟನೆ ನಡೆಯುತ್ತಿದೆ. ಗ್ರಂಥಾಲಯ ಇಲಾಖೆಯಲ್ಲಿ ಖರೀದಿಸಿರುವ ಪುಸ್ತಕಗಳಿಗೆ ಹಣ ನೀಡಲು ಕಾಸಿಲ್ಲದ ಪರಿಸ್ಥಿತಿ, ಸರಕಾರಿ ಆಸ್ಪತ್ರೆಗಳಲ್ಲಿ ಬಡವರಿಗೆ ಉಚಿತವಾಗಿ ಔಷಧಿ ನೀಡದಂತಹ ಪರಿಸ್ಥಿತಿ ಎದುರಾಗಿದೆ. ಇದು ಸರಕಾರದ ಗಮನಕ್ಕೆ ಬಂದಿದೆಯೇ. ಹಾಗಿದ್ದಲ್ಲಿ ಈ ಹಣವನ್ನು ಅನ್ಯ ಕಾರ್ಯಗಳಿಗೆ ಬಳಸಿಕೊಳ್ಳಲು ಕಾಯ್ದೆಯಲ್ಲಿ ಅವಕಾಶವಿಲ್ಲ, ಇದು ಕಾಯ್ದೆಯ ನಿಬಂಧನೆಗಳ ಉಲ್ಲಂಘನೆಯಾಗುತ್ತಿದ್ದರೂ, ಸರಕಾರ ಇದರ ಬಗ್ಗೆ ಗಮನ ಹರಿಸದಿರುವ ಕುರಿತು.

**ಉತ್ತರ:-**

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆಯೊಂದಿಗೆ ಈ ಕೆಳಕಂಡ ಶಾಸನಬದ್ಧ ಉಪಕರಗಳನ್ನು ಸಂಗ್ರಹಿಸಲಾಗುತ್ತಿದೆ.

| ಕ್ರ. ಸಂ. | ಉಪಕರಗಳು | ಶೇಕಡವಾರು |
|---|---|---|
| 1. | ಆರೋಗ್ಯ ಉಪಕರ | 15% |
| 2. | ಗ್ರಂಥಾಲಯ ಉಪಕರ | 6% |
| 3. | ಭಿಕ್ಷುಕರ ಉಪಕರ | 3% |
| 4. | ನಗರ ಸಾರಿಗೆ ಉಪಕರ | 2% |
| | **ಒಟ್ಟು** | **26%** |

ಮೇಲ್ಕಂಡಂತೆ ಸಂಗ್ರಹಿಸಲಾಗುತ್ತಿರುವ ಉಪಕರಗಳ ಮೊತ್ತದಲ್ಲಿ ಶೇಕಡಾ 10 ರಷ್ಟನ್ನು ಸಂಗ್ರಹ ವೆಚ್ಚವಾಗಿ ಉಳಿಸಿಕೊಂಡು, ಉಳಿದ ಮೊತ್ತವನ್ನು ಸಂಬಂಧಿಸಿದ ಇಲಾಖೆ / ಪ್ರಾಧಿಕಾರಗಳಿಗೆ ಪಾವತಿಸಲಾಗುತ್ತಿದೆ. 2021 ರ ಪೂರ್ವದಲ್ಲಿ ಆಸ್ತಿ ತೆರಿಗೆಯೊಂದಿಗೆ ಸಂಗ್ರಹಿಸಲಾದ ಉಪಕರಗಳನ್ನು ನಗರ ಸ್ಥಳೀಯ ಸಂಸ್ಥೆಗಳ ನಿಧಿಗೆ ಜಮಾ ಮಾಡಲಾಗಿದ್ದು, ಸದರಿ ಮೊತ್ತವನ್ನು ನಗರ ಸ್ಥಳೀಯ ಸಂಸ್ಥೆಗಳು ಬಳಕೆ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ ಆಸ್ತಿ ತೆರಿಗೆಯೊಂದಿಗೆ ಸಂಗ್ರಹ ಮಾಡಲಾಗುವ ಉಪಕರಗಳನ್ನು ಬೇರೆ ಉದ್ದೇಶಕ್ಕೆ ಬಳಕೆ ಮಾಡುವುದನ್ನು ತಪ್ಪಿಸಲು, ಸ್ವಯಂ ಚಾಲಿತವಾಗಿ ಉಪಕರ ಮೀಸಲು ಬ್ಯಾಂಕ್ ಖಾತೆಗೆ (CESSES ESCROW BANK ACCOUNT) ವರ್ಗಾಯಿಸಿ, ಸಂಬಂಧಿಸಿದ ಇಲಾಖೆಗೆ ಪಾವತಿಸಲು ಈಗಾಗಲೇ ತಂತ್ರಾಂಶದಲ್ಲಿ ಅಗತ್ಯ ಮಾರ್ಪಾಡು ಮಾಡಲಾಗಿದೆ.

ಮುಂದುವರೆದು, ಬಾಕಿ ಇರುವ ಎಲ್ಲಾ ಉಪಕರಗಳನ್ನು ಪ್ರತಿ 3 ತಿಂಗಳಿಗೊಮ್ಮೆ ಸಂಬಂಧಪಟ್ಟ ಇಲಾಖೆ / ಪ್ರಾಧಿಕಾರಗಳಿಗೆ ಹಂತ ಹಂತವಾಗಿ ಪಾವತಿಸಲು ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಪೌರಾಡಳಿತ ನಿರ್ದೇಶನಾಲಯದಿಂದ ಅಗತ್ಯ ಸೂಚನೆಗಳನ್ನು ನೀಡಲಾಗಿದೆ.

**ಸಂಖ್ಯೆ: ನಅಇ 120 ಜಿಇಎಲ್ 2026 (ಇ)**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು